ಶಾಸನರಚನಾ ಕಾರ್ಯಕಲಾಪಗಳು

೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ(ಸಂಖ್ಯೆ ೨)ವಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಅಧ್ಯಕ್ಷರು.—ಈ ವಿಧೇಯಕವನ್ನು ಮಂಡಿಸಲು ರಾಜ್ಯಪಾಲರು ಅನುಮತಿ ನೀಡಿದ್ದಾರೆ.

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ).—ಮಾನ್ಯ ಅಧ್ಯಕ್ಷರೇ, ೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ ೨) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ ೨) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ನೀಡುವುದು'',

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿನೀಡಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ).—ಮಾನ್ಯ ಅಧ್ಯಕ್ಷರೇ,
''೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ(ಸಂಖ್ಯೆ ೨) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ''

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.

೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ (ಸಂಖ್ಯೆ ೨)ವಿಧೇಯಕ ಪರ್ಯಾಲೋಚನಾಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್(ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ).—ಮಾನ್ಯ ಅಧ್ಯಕ್ಷರೇ,

೧೯೮೮ನೇ ಇಸವಿಯ ಕರ್ನಾಟಕ ಧನವಿನಿಯೋಗ(ಸಂಖ್ಯೆ ೨)ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಎ. ಲಕ್ಷ್ಮೀಸಾಗರ್.—ಸನ್ಮಾನ್ಯ ಅಧ್ಯಕ್ಷರೇ, ಈ ಎಲ್ಲಾ ಬೇಡಿಕೆಗಳ ಮೇಲೆ ವಿಫಲವಾದಂಥ ಹಾಗೂ ಹಿಂದಿನ ವರ್ಷಗಳಲ್ಲಿ ಇದ್ದ ಸಮಯಕ್ಕಿಂತ ಕಿಚ್ಚು ಸಮಯದವರೆಗೆ ಮಾನ್ಯ ಸದಸ್ಯರುಗಳು ಚರ್ಚೆಯನ್ನು ಮಾಡಿದ್ದಾರೆ ಈ ಚರ್ಚೆಗೆ ನನ್ನ ದೃಷ್ಟಿಯಲ್ಲಿ ಎಲ್ಲಾ ಸನ್ಮಾನ್ಯ ಮಂತ್ರಿಗಳು ಸಮರ್ಪಕವಾದಂಥ ಹಾಗೂ ಅಂಕಿ ಅಂಶಗಳ ಸಮೇತವಾದಂತ ಉತ್ತರವನ್ನು ಕೊಟ್ಟಿದ್ದಾರೆ ಈ ಹಿನ್ನೆಲೆಯಲ್ಲಿ ಇದೊಂದು ತಾತ್ಕಾಲಿಕವಾದ ವಿಧೇಯಕ . ಇದಕ್ಕೆ ಮಾನ್ಯ ಸದಸ್ಯರೆಲ್ಲರೂ ತಮ್ಮ ಸಂಪೂರ್ಣವಾದ ಬೆಂಬಲವನ್ನು ವ್ಯಕ್ತಪಡಿಸಿ ಇದನ್ನು ಪಾಸ್ ಮಾಡಿಕೊಡಬೇಕೆಂದು ನಾನು ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ ಮನವಿ ಮಾಡುತ್ತೇನೆ.

†ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ(ವಿರೋಧ ಪಕ್ಷದ ಉಪನಾಯಕರು).—ಮಾನ್ಯ ಅಧ್ಯಕ್ಷರೆ, ಇದರಲ್ಲಿ ಹೇಳತಕ್ಕಂಥಾದ್ದು ಏನಿಲ್ಲ. ಒಂದು ಮಾತನ್ನು ಮಾನ್ಯ ಮುಖ್ಯ ಮಂತ್ರಿಗಳು ಕ್ಲಾರಿಫೈ ಮಾಡಬೇಕು ಏಕೆಂದರೆ ನಾವು ಎಷ್ಟು ಮಾತನಾಡಿದರೂ ಕೂಡ ಬಜೆಟ್‌ನಲ್ಲಿ, ನಾವು ಎಲ್ಲವನ್ನೂ ಪಾಸ್‌ಮಾಡುತ್ತೇವೆ. ಪಾಸ್ ಮಾಡಿಕೊಟ್ಟ ಮೇಲೆ ಅನೇಕ ಕೆಲಸಗಳ ಬಗ್ಗೆ ಬಜೆಟ್‌ನಲ್ಲಿ ಅಮೌಂಟ್ ಪ್ರಾವಿಜನ್ ಮಾಡಿದ್ದರೂ ಕೂಡಾ ಅನೇಕ ಕೆಲಸಗಳಿಗೆ ಅಡ್ಮಿನಿಸ್ಟ್ರೇಟಿವ್ ಅಪ್ರೂವಲ್ ಕೊಡುವುದಿಲ್ಲ. ಫೈನಾನ್ಸ್ ಡಿಪಾರ್ಟ್‌ಮೆಂಟ್‌ನವರು ಏನುತ್ತಾರೆ ಎಂದರೆ ಮಾನ್ಯ ಮುಖ್ಯ ಮಂತ್ರಿಗಳಿಂದ ಆದೇಶ ಬಂದರೆ ಮಾತ್ರ ಇದನ್ನು

† ಈ ಚಿಹ್ನೆ ಮಾನ್ಯ ಸದಸ್ಯರು ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದು ಸೂಚಿಸುತ್ತದೆ.